# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(4)ಪಿ.ಆರ್/63/2024-25

ಮುಖ್ಯ ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 31/7/2024

## ಕಛೇರಿ ಆದೇಶ

ವಿಷಯ: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರೂಪ್-'ಸಿ' ವೃಂದದ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರ ಸಾಮಾನ್ಯ ವರ್ಗಾವಣೆ ಬಗ್ಗೆ.

ಉಲ್ಲೇಖ:
1) ಸರ್ಕಾರದ ಆದೇಶ ಸಂಖ್ಯೆ: ನಅಇ 63 ಎಂ.ಎನ್.ಯು 2023, ದಿ: 04-07-2024
2) ಸಂಖ್ಯೆ: ಬಿ12(5)ಪಿ.ಆರ್/112/24-25, ದಿನಾಂಕ: 20-07-2024ರ ಸುತ್ತೋಲೆ
3) ಮಾನ್ಯ ಮುಖ್ಯ ಆಯುಕ್ತರು ರವರು ಸಂಖ್ಯೆ: ಬಿ12(5)ಪಿ.ಆರ್/112/24-25 ರಲ್ಲಿ ದಿನಾಂಕ: 22-07-2024ರಂದು ಹೊರಡಿಸಿರುವ ಮಾರ್ಗಸೂಚಿಗಳು
4) ದಿನಾಂಕ:26-07-2024ರಂದು ಸ್ಥಳ ಆಯ್ಕೆ ಸಂಬಂಧ ನಡೆದ ಕೌನ್ಸಿಲಿಂಗ್ ಪ್ರಕ್ರಿಯೆ.

------------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ-(1)ರ ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಆದೇಶದನುಸಾರ ಉಲ್ಲೇಖ-(2)ರ ಸುತ್ತೋಲೆಯಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರೂಪ್-'ಸಿ' ವೃಂದದ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರ ಸಾಮಾನ್ಯ ವರ್ಗಾವಣೆ ಪ್ರಕ್ರಿಯೆಯನ್ನು ಕೈಗೊಳ್ಳಲಾಗಿದ್ದು, ಉಲ್ಲೇಖ-(4)ರಂತೆ ನಡೆದ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಕೆಳಕಂಡ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರು ಆಯ್ಕೆ ಮಾಡಿರುವಂತೆ ಅವರುಗಳ ಹೆಸರಿನ ಮುಂದೆ ನಮೂದಿಸಿರುವ ಸ್ಥಳಗಳಲ್ಲಿ ಕಾರ್ಯನಿರ್ವಹಿಸಲು ವರ್ಗಾಯಿಸಿ ಆದೇಶಿಸಿದೆ.

| ಕ್ರಮ ಸಂಖ್ಯೆ | ಹೆಸರು | ಹಾಲಿ ಕಾರ್ಯನಿರ್ವಹಿಸುತ್ತಿರುವ ಸ್ಥಳ | ಕೌನ್ಸಿಲಿಂಗ್ ಮುಖಾಂತರ ಆಯ್ಕೆ ಮಾಡಿಕೊಂಡಿರುವಂತೆ ವರ್ಗಾಯಿಸಿ ನೇಮಿಸಿರುವ ಸ್ಥಳ |
|---|---|---|---|
| 1. | ಮಮತಾ ಎಂ. | ನಂದಿನ ಲೇಔಟ್ ಪ್ರಾಥಮಿಕ ಆರೋಗ್ಯ ಕೇಂದ್ರ, ರಾಜರಾಜೇಶ್ವರಿ ನಗರ ವಲಯ | ಸುಭಾಷ್ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ, ಪಶ್ಚಿಮ ವಲಯ ಇಲ್ಲಿ ಖಾಲಿ ಇರುವ ಸ್ಥಳಕ್ಕೆ |
| 2. | ಮಂಜಮ್ಮ ಎ ಎನ್ | ನಂದಿನ ಲೇಔಟ್ ಪ್ರಾಥಮಿಕ ಆರೋಗ್ಯ ಕೇಂದ್ರ, ರಾಜರಾಜೇಶ್ವರಿ ನಗರ ವಲಯ | ನಾಗಪ್ಪಬ್ಲಾಕ್ ಪ್ರಾಥಮಿಕ ಆರೋಗ್ಯ ಕೇಂದ್ರ, ಪಶ್ಚಿಮ ವಲಯ ಇಲ್ಲಿ ಖಾಲಿ ಇರುವ ಸ್ಥಳಕ್ಕೆ |
| 3. | ಶಿವನಂಜಮ್ಮ. ಜಿ | ನೇತಾಜಿ ಸರ್ಕಲ್ ಪ್ರಾಥಮಿಕ ಆರೋಗ್ಯ ಕೇಂದ್ರ, ರಾಜರಾಜೇಶ್ವರಿ ನಗರ ವಲಯ | ಸುಬೇದಾರ್ ಪಾಳ್ಯ ಪ್ರಾಥಮಿಕ ಆರೋಗ್ಯ ಕೇಂದ್ರ ಪಶ್ಚಿಮ ವಲಯ ಇಲ್ಲಿ ಖಾಲಿ ಇರುವಸ್ಥಳಕ್ಕೆ |

ಮೇಲ್ಕಂಡ ಆದೇಶದನ್ವಯ ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು/ಇಲಾಖಾ ಮುಖ್ಯಸ್ಥರುಗಳು ವರ್ಗಾವಣೆಗೊಂಡ ನೌಕರರುಗಳು ವರ್ಗಾಯಿಸಲಾಗಿರುವ ಸ್ಥಳಗಳಲ್ಲಿ ಕಾರ್ಯನಿರ್ವಹಿಸಲು ಅನುವಾಗುವಂತೆ ಅಗತ್ಯ ಕ್ರಮ ಕೈಗೊಳ್ಳುವುದು.

ಮೇಲ್ಕಂಡ ಆದೇಶವು ಈ ಕೆಳಕಂಡ ಷರತ್ತಿಗೊಳಪಟ್ಟಿರುತ್ತದೆ.

**ಷರತ್ತುಗಳು:-**

1. ಸಾಮಾನ್ಯ ವರ್ಗಾವಣೆಗೊಂಡಿರುವ ಸಿಬ್ಬಂದಿಗಳು ಬೇರೆ ಸ್ಥಳಕ್ಕೆ ವರ್ಗಾವಣೆ ಕೋರುವಂತಿಲ್ಲ ಹಾಗೂ ಈ ಆದೇಶವನ್ನು ಪಾಲಿಸದ ಸಂಬಂಧಪಟ್ಟ ಸಿಬ್ಬಂದಿಗಳ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಲಾಗುವುದು.

2. ವರ್ಗಾವಣೆ ಪ್ರಕ್ರಿಯೆ ಬಗ್ಗೆ ಯಾವುದಾದರೂ ಆಕ್ಷೇಪಣೆಗಳು / ದೂರುಗಳು ಸ್ವೀಕೃತಿಯಾದಲ್ಲಿ ಪರಿಶೀಲಿಸಿ ಕ್ರಮ ಕೈಗೊಳ್ಳುವ ಷರತ್ತಿಗೊಳಪಡಿಸಿದೆ.
3. ಸದರಿ ವರ್ಗಾವಣೆ ಆದೇಶದಲ್ಲಿ ವರ್ಗಾವಣೆಗೊಂಡಿರುವ ನೌಕರರುಗಳು ವರ್ಗಾವಣೆಗೊಂಡ ಸ್ಥಳಗಳಿಗೆ ವರದಿ ಮಾಡಿಕೊಳ್ಳುವ ಬಗ್ಗೆ ವಲಯ ಆಯುಕ್ತರು / ಜಂಟಿ ಆಯುಕ್ತರುಗಳು / ಇಲಾಖಾ ಮುಖ್ಯಸ್ಥರುಗಳು ಅಗತ್ಯ ಕ್ರಮ ಕೈಗೊಳ್ಳುವುದು.

31-7-24

(ಮಾನ್ಯ ಮುಖ್ಯ ಆಯುಕ್ತರು ರವರ ಆದೇಶದಂತೆ)

ವಿಶೇಷ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

31/7/24

31.7.24

ಪ್ರತಿಯನ್ನು: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಎಲ್ಲಾ ವಲಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಎಲ್ಲಾ ವಲಯ ಜಂಟಿ ಆಯುಕ್ತರುಗಳಿಗೆ ಕಳುಹಿಸಿದೆ.
: ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು ರವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
: ಎಲ್ಲಾ ಇಲಾಖಾ ಮುಖ್ಯಸ್ಥರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
: ಸಂಬಂಧಪಟ್ಟ ನೌಕರರಿಗೆ/ಕಛೇರಿ ಪ್ರತಿ.